# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 769
**ಸದಸ್ಯರ ಹೆಸರು** : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
**ಉತ್ತರಿಸುವ ದಿನಾಂಕ** : 26.12.2022
**ಉತ್ತರಿಸುವ ಸಚಿವರು** : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೇಂದ್ರ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕನ್ನಡದಲ್ಲಿ ನಡೆಸುವ ಸಂಬಂಧ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಂದಿಗೆ ಯಾವುದಾದರೂ ಸಭೆ ನಡೆಸಿದೆಯೇ; ನಡೆಸಿದ್ದಲ್ಲಿ, ಸಭೆಯಲ್ಲಿ ಕೇಂದ್ರ ಸರ್ಕಾರದ ನಿಲುವೇನು; ಯಾವುದೇ ಸಭೆ ನಡೆಸದೆ ಇದ್ದಲ್ಲಿ ರಾಜ್ಯ ಸರ್ಕಾರವು ಯಾವ ಕಾಲಮಿತಿಯೊಳಗೆ ಕೇಂದ್ರ ಸರ್ಕಾರವನ್ನು ಭೇಟಿ ಮಾಡಿ ಸದರಿ ಸಮಸ್ಯೆಯ ಬಗ್ಗೆ ಚರ್ಚಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು).</td><td>ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕೇಂದ್ರ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕನ್ನಡದಲ್ಲಿ ನಡೆಸುವ ಸಂಬಂಧ ಕೇಂದ್ರ ಹಣಕಾಸು ಸಚಿವರಿಗೆ ದಿನಾಂಕ:28.10.2020ರ ಮತ್ತು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವರಿಗೆ ದಿನಾಂಕ:25.08.2021ರ ಪತ್ರದಲ್ಲಿ ಮನವಿ ಮಾಡಲಾಗಿರುತ್ತದೆ.<br><br>ಈ ಸಂಬಂಧ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಿಯೋಗವು ದಿನಾಂಕ:20, 21 ಮತ್ತು 22ರ ಡಿಸೆಂಬರ್ 2021ರಂದು ದೆಹಲಿಗೆ ಭೇಟಿ ನೀಡಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕನ್ನಡದಲ್ಲಿ ನಡೆಸುವಂತೆ ಕೇಂದ್ರ ಸರ್ಕಾರದ ಸಚಿವರಿಗೆ ಮನವಿ ಮಾಡಲಾಗಿರುತ್ತದೆ.</td></tr>
<tr><td>ಆ)</td><td>ಕೇಂದ್ರ ಸರ್ಕಾರಿ ಕಚೇರಿಗಳ ನೇಮಕಾತಿ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇಂಗ್ಲೀಷ್ ಮತ್ತು ಹಿಂದಿ ಭಾಷೆಗಳಲ್ಲಿ ಮಾತ್ರ ಪರೀಕ್ಷೆಗಳು ನಡೆಯುತ್ತಿದ್ದು, ಇದು ಕನ್ನಡಿಗರ ಉದ್ಯೋಗವಕಾಶವನ್ನು ಕಸಿಯುವಂಥಾ ತಾರತಮ್ಯವಾಗಿದ್ದು, ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು; (ಸಂಪೂರ್ಣವಾದ ಮಾಹಿತಿ ನೀಡುವುದು).</td><td rowspan="3">ಕೇಂದ್ರ ಸರ್ಕಾರಿ ಕಚೇರಿಗಳ ನೇಮಕಾತಿಗೆ ಸಂಬಂಧಿಸಿದಂತೆ ಕನ್ನಡ ಭಾಷಿಕ ಅಭ್ಯರ್ಥಿಗಳಿಗೆ ತಾರತಮ್ಯವಾಗದಂತೆ ಕನ್ನಡ ಭಾಷೆಯಲ್ಲಿ ಪರೀಕ್ಷೆಗಳು ನಡೆಯಬೇಕೆಂಬುದು ಸರ್ಕಾರದ ನಿಲುವಾಗಿದ್ದು, ಈ ಸಂಬಂಧ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಪತ್ರಗಳ ಮೂಲಕ ನಿರಂತರವಾಗಿ ಕೇಂದ್ರ ಸರ್ಕಾರದ ಗಮನ ಸೆಳೆಯುತ್ತಿದೆ.</td></tr>
<tr><td>ಇ)</td><td>ಭಾಷಾ ಸಂಬಂಧಿತ ಅನಾನುಕೂಲಗಳು ಉಲ್ಬಣಗೊಳ್ಳುವ ಸಾಧ್ಯತೆಗಳು ಹೆಚ್ಚುವುದರಿಂದ ದೇಶಾದ್ಯಂತ ನಡೆಯುವ ನೇಮಕಾತಿಯು ಈ ಹಿಂದಿನಂತೆ ವಲಯವಾರು ಆಗುವುದು ನಾಡಿನ ಜನತೆಯ ಸುಲಲಿತೆಯ ದೃಷ್ಟಿಯಿಂದ ಮಹತ್ವದಾಗಿದ್ದು, ಇಡೀ ನೇಮಕಾತಿ ಪ್ರಕ್ರಿಯೆಯು ವಲಯವಾರು ನಡೆಯುವುದು ಮತ್ತು ಕನ್ನಡದಲ್ಲಿ ಕೂಡಾ ನಡೆಯುವುದು ಕನ್ನಡಿಗರು ಅರ್ಜಿ ಸಲ್ಲಿಸಲು ಮತ್ತು ನೇಮಕವಾಗಲು ಸಹಕಾರಿಯಾಗಿಲ್ಲವೇ;</td></tr>
<tr><td>ಈ)</td><td>ಕೇಂದ್ರ ಸರ್ಕಾರದ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕನ್ನಡವಿಡುವ ಸಂಬಂಧ ಸರ್ಕಾರವು ಯಾವ ಕ್ರಮವನ್ನು ಕೈಗೊಳ್ಳಲಾಗುವುದು?</td></tr>
</table>

**ಸಂಖ್ಯೆ.ಕಸಂವಾ 167 ಕೆಒಎಲ್ ಆಕ 2022**

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು